## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 755 |
| ಸದಸ್ಯರ ಹೆಸರು | ಶ್ರೀ. ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾ ದಿನಾಂಕ | 21.08.2026 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಅಕ್ರಮ ಗಣಿಗಾರಿಕೆ, ಅಕ್ರಮ ಕಲ್ಲು/ಮರಳು ಸಾಗಾಣಿಕೆ ಪ್ರಕರಣಗಳು ಎಷ್ಟು ದಾಖಲಾಗಿವೆ; ಎಷ್ಟು ಪ್ರಕರಣಗಳಲ್ಲಿ ದಂಡ ವಿಧಿಸಲಾಗಿದೆ ಮತ್ತು ಸರ್ಕಾರಕ್ಕೆ ಎಷ್ಟು ರಾಜಸ್ವ ಸಂಗ್ರಹವಾಗಿದೆ; | • ರಾಜ್ಯದಲ್ಲಿ 2024-25 ನೇ ಸಾಲಿನಿಂದ 2026-27ನೇ ಸಾಲಿನ (ಜುಲೈ-2026ರ ಮಾಹೆಯವರೆಗೆ) ಅಕ್ರಮ ಗಣಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಪ್ರಕರಣಗಳನ್ನು ಪತ್ತೆ ಹಚ್ಚಿದ್ದು, ಸದರಿಯವರ ವಿರುದ್ಧ ಎಂ.ಎಂ. (ಡಿ & ಆರ್) ಕಾಯ್ದೆ -1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮಗಳಂತೆ ಮೊಕದ್ದಮೆಗಳನ್ನು ದಾಖಲಿಸಿ, ದಂಡವನ್ನು ವಿಧಿಸಿ ಸಂಗ್ರಹಿಸಲಾಗಿದ್ದು, ವಿವರಗಳು ಈ ಕೆಳಕಂಡಂತಿದೆ: |

ಮುಖ್ಯ ಖನಿಜ ಗಣಿಗಾರಿಕೆ ಮತ್ತು ಸಾಗಾಣಿಕೆ :-

| ಕ್ರ ಸಂ. | ವರ್ಷ | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ಸಂಗ್ರಹಿಸಿದ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿರುವ ಮೊಕದ್ದಮೆ ಗಳ ಸಂಖ್ಯೆ |
|---|---|---|---|---|
| 1. | 2024-25 | 09 | 3.31 | 08 |
| 2. | 2025-26 | 03 | 5.00 | 02 |
| 3. | (ಜುಲೈ-2026 ರ ಅಂತ್ಯಕ್ಕೆ) | - | - | - |
| | ಒಟ್ಟು | 12 | 8.31 | 10 |

ಅನಧಿಕೃತ ಕಲ್ಲು ಗಣಿಗಾರಿಕೆ ಮತ್ತು ಸಾಗಾಣಿಕೆ :-

| ಕ್ರ. ಸಂ. | ವರ್ಷ | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ಸಂಗ್ರಹಿಸಿದ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿರುವ ಮೊಕದ್ದಮೆ ಗಳ ಸಂಖ್ಯೆ |
|---|---|---|---|---|
| 1. | 2024-25 | 5669 | 2370.98 | 201 |
| 2. | 2025-26 | 6221 | 3053.56 | 259 |
| 3. | (ಜುಲೈ-2026 ರ ಅಂತ್ಯಕ್ಕೆ) | 1086 | 809.43 | 69 |
| | ಒಟ್ಟು | 12976 | 6233.97 | 529 |

ಅನಧಿಕೃತ ಮರಳು ಗಣಿಗಾರಿಕೆ ಮತ್ತು ಸಾಗಾಣಿಕೆ :-

| ಕ್ರ. ಸಂ. | ವರ್ಷ | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ಸಂಗ್ರಹಿಸಿದ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿರುವ ಮೊಕದ್ದಮೆ ಗಳ ಸಂಖ್ಯೆ |
|---|---|---|---|---|
| 1. | 2024-25 | 3163 | 792.17 | 917 |
| 2. | 2025-26 | 3338 | 790.68 | 1134 |
| 3. | (ಜುಲೈ-2026 ರ ಅಂತ್ಯಕ್ಕೆ) | 1198 | 274.57 | 413 |
| | ಒಟ್ಟು | 7699 | 1857.42 | 2464 |

• ರಾಜ್ಯದಲ್ಲಿ 2023-24 ನೇ ಸಾಲಿನಿಂದ 2026-27 ನೇ ಸಾಲಿನವರೆಗೆ (ಜುಲೈ-2026ರ ಅಂತ್ಯದವರೆಗೆ) ಗಣಿಗಾರಿಕೆಯಿಂದ ಸಂಗ್ರಹಿಸಿರುವ ರಾಜಧನದ ಮಾಹಿತಿ :-

(ರೂ.ಕೋಟಿಗಳಲ್ಲಿ)

| ಕ್ರ.ಸಂ. | ವರ್ಷ | ಸಂಗ್ರಹಿಸಿದ ರಾಜಧನ | | |
|---|---|---|---|---|
| | | ಮುಖ್ಯ ಖನಿಜ | ಉಪಖನಿಜ | ಒಟ್ಟು |
| 1 | 2023-24 | 5317.61 | 2003.98 | 7321.59 |
| 2 | 2024-25 | 5852.37 | 1846.60 | 7698.97 |
| 3 | 2025-26 | 6801.11 | 2044.28 | 8845.39 |
| 4 | (ಜುಲೈ-2026ರ ಅಂತ್ಯದವರೆಗೆ) | 2087.25 | 575.73 | 2662.98 |

| | | |
|---|---|---|
| ಆ) | ಅನುಮತಿ ಇಲ್ಲದೆ ನಡೆಯುತ್ತಿರುವ ಗಣಿಗಾರಿಕೆ ಚಟುವಟಿಕೆಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಇಂತಹ ಗಣಿಗಾರಿಕೆಯಿಂದ ಪರಿಸರ, ಕೃಷಿಭೂಮಿ ಮತ್ತು ಗ್ರಾಮೀಣ ರಸ್ತೆಗಳ ಮೇಲೆ ಉಂಟಾಗುತ್ತಿರುವ ಪರಿಣಾಮವನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | • ಮುಖ್ಯ ಖನಿಜ ಮತ್ತು ಉಪಖನಿಜ ಗಣಿಗಾರಿಕೆಗೆ ಕಾಯ್ದೆ ಮತ್ತು ನಿಯಮಗಳನುಸಾರ ಗುತ್ತಿಗೆ ಅಥವಾ ಲೈಸೆನ್ಸ್ ಪಡೆಯದೆ ಗಣಿಗಾರಿಕೆ ನಡೆಸುವವರ ವಿರುದ್ಧ ಎಂ.ಎಂ. (ಡಿ & ಆರ್) ಕಾಯ್ದೆ -1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮಗಳಂತೆ ಮೊಕದ್ದಮೆಗಳನ್ನು ದಾಖಲಿಸಿ, ದಂಡವನ್ನು ವಿಧಿಸಿ ಸಂಗ್ರಹಿಸಲಾಗುತ್ತಿದೆ.<br>• ಮುಖ್ಯ ಖನಿಜಗಳ ಗಣಿಗಾರಿಕೆಗೆ ಗುತ್ತಿಗೆಗಳನ್ನು ಮಂಜೂರಾತಿಗೆ ಪರಿಸರ ಅನುಮತಿ **(Environment Clearance)**, ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ **(KSPCB)** ಯಿಂದ ಸಮ್ಮತಿ ಪತ್ರ ಮತ್ತು ಗಣಿಗಾರಿಕೆ ಪ್ರದೇಶವು ಅರಣ್ಯ ಭೂಮಿಗೆ ಒಳಪಟ್ಟಿದ್ದಲ್ಲಿ, ಅರಣ್ಯ ಇಲಾಖೆ ಅನುಮತಿಯನ್ನು ಪಡೆದು ಷರತ್ತು ಮತ್ತು ನಿಬಂಧನೆಗಳನ್ನು ಪಾಲಿಸಿದ ನಂತರವೇ ಗಣಿ ಕಾರ್ಯನಿರ್ವಹಿಸಲು ಅನುಮತಿಸಲಾಗುತ್ತದೆ.<br>• ಗಣಿಗಾರಿಕೆ ಸಂಬಂಧಿಸಿದ ಕಾರ್ಯಾಚರಣೆಗಳಿಂದ ಹಾಗೂ ತತ್ಸಂಬಂಧೀ ಪರಿಸರಾತ್ಮಕ ಪರಿಣಾಮಗಳಿಂದ ಬಾಧಿತರಾಗುವ ಜನರು ಮತ್ತು ವನ್ಯಜೀವಿಗಳ ಸುರಕ್ಷತೆ ಹಾಗೂ ಪುನರ್ವಸತಿಗಾಗಿ ಜಿಲ್ಲಾ ಖನಿಜ ಪ್ರತಿಷ್ಠಾನ ವತಿಯಿಂದ ಕ್ರಿಯಾ ಯೋಜನೆಗಳನ್ನು ರೂಪಿಸಿ ಅನುಷ್ಠಾನ ಮಾಡುವ ಮೂಲಕ ಗಣಿ ಬಾಧಿತ ಪ್ರದೇಶಗಳ ಅಭಿವೃದ್ಧಿಗಾಗಿ ಹಾಗೂ ಸುತ್ತಮುತ್ತಲಿನ ಸಮಸ್ಯೆಗೆ ಒಳಗಾದ ಗ್ರಾಮಗಳಿಗೆ ಆರೋಗ್ಯ ಸೌಲಭ್ಯ ಒದಗಿಸಲಾಗುತ್ತಿದೆ.<br>• ಮಾನ್ಯ ಸರ್ವೋಚ್ಚ ನ್ಯಾಯಾಲಯವು **W.P.No.562/2009**ರ ಪ್ರಕರಣದಲ್ಲಿ ಆದೇಶಿಸಿದಂತೆ ಕಂಪನಿ ಕಾಯ್ದೆ-2013ರ ಸೆಕ್ಷನ್-8ರಡಿ ಬಳ್ಳಾರಿ, ಚಿತ್ರದುರ್ಗ, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಕಬ್ಬಿಣದ ಅದಿರಿನ ಗಣಿಗಾರಿಕೆಯಿಂದ ಬಾಧಿತವಾದ ಪ್ರದೇಶ ಅಭಿವೃದ್ಧಿಗಾಗಿ **"Karnataka Mining Environment Restoration Corporation" (KMERC)** ಸ್ಥಾಪಿಸಲಾಗಿದೆ.<br>• **KMERC** ವತಿಯಿಂದ ಗಣಿಭಾದಿತ ಪ್ರದೇಶಗಳಲ್ಲಿ ಪುನರ್ ವಸತಿ ಹಾಗೂ ಪುನಃಶ್ಚೇತನ ಕ್ರಿಯಾ ಯೋಜನೆ ರೂಪಿಸಿ ಸಲ್ಲಿಸಿದ ಯೋಜನೆಯನ್ನು ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ: **21-04-2022** ರಂದು ತಾತ್ವಿಕ ಅನುಮೋದನೆ ನೀಡಿದೆ.<br>• ಸದರಿ ಯೋಜನೆ ಅನುಷ್ಠಾನಕ್ಕಾಗಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರನ್ನು **Oversight Authority** ಯಾಗಿ ನೇಮಿಸಿರುತ್ತದೆ.<br>• ಉಪಖನಿಜಗಳ ಗಣಿಗಾರಿಕೆಗೆ ಸಂಬಂಧಿಸಿದಂತೆ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮ-8(1-A) ರಂತೆ ಕಲ್ಲುಗಣಿ ಗುತ್ತಿಗೆ ಮಂಜೂರಾತಿಗೆ ರಾಜ್ಯ ಪರಿಸರ ಅಘಾತ ಅಂದಾಜೀಕರಣ ಪ್ರಾಧಿಕಾರದಿಂದ ಪರಿಸರ ಅನುಮತಿ ಪತ್ರ ಸಲ್ಲಿಸುವುದು ಕಡ್ಡಾಯವಿದ್ದು, ಅದರಂತೆ ಸದರಿ ಶಾಸನ ಬದ್ಧ ದಾಖಲಾತಿಗಳನ್ನು ಪಡೆದು ಕಲ್ಲುಗಣಿ ಗುತ್ತಿಗೆಗಳನ್ನು ಮಂಜೂರಾತಿ ನೀಡಲಾಗುತ್ತಿದೆ.<br>• ಗಣಿ ಬಾಧಿತ ಪ್ರದೇಶಗಳಲ್ಲಿ ಗಣಿಗಾರಿಕೆಯಿಂದ ಭಾದಿತ ಪ್ರದೇಶದಲ್ಲಿ ಪುನಶ್ಚೇತನ ಕಾರ್ಯಗಳನ್ನು ಕೈಗೊಳ್ಳಲು ಜಿಲ್ಲಾ ಖನಿಜ ಪ್ರತಿಷ್ಠಾನ **(DMF)** ನಿಧಿಯಡಿ **Physical Infrastructure Sector** ನಲ್ಲಿ ಧೂಳು ನಿಯಂತ್ರಣ, ರಸ್ತೆಗಳಿಗೆ ನೀರು ಸಿಂಪಡಣೆ, ರಸ್ತೆ ಸುಧಾರಣೆ ಹಾಗೂ ಇತರ ಅಗತ್ಯ ಮೂಲಸೌಕರ್ಯ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. 2015-16ನೇ ಸಾಲಿನಿಂದ 2026-27ನೇ ಸಾಲಿನ ಜುಲೈ ಅಂತ್ಯದವರೆಗೆ, ಈ ವಲಯದಡಿ ಒಟ್ಟು 69 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಒಟ್ಟು ರೂ.47.67 ಕೋಟಿ ಅನುದಾನವನ್ನು ಮೀಸಲಿರಿಸಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>• ಅಕ್ರಮ ಗಣಿಗಾರಿಕೆಯಿಂದ ರೈತರ ಜಮೀನಿಗೆ ಹಾನಿಯಾಗುತ್ತಿರುವ ಬಗ್ಗೆ ದೂರುಗಳು ಸ್ವೀಕೃತವಾಗಿಲ್ಲ. .<br>• ಗಣಿಗುತ್ತಿಗೆದಾರರು ಜಮೀನಿನ ಪಟ್ಟಾದಾರರಿಂದ ಅನುಮತಿ ಪತ್ರ ಪಡೆದು, ಕೃಷಿಯೇತರ ಉದ್ದೇಶಕ್ಕೆ ಭೂಪರಿವರ್ತನೆ ಮಾಡಿದ ನಂತರ ಗಣಿಗಾರಿಕೆ ನಡೆಸುವುದು ಕಡ್ಡಾಯವಾಗಿದೆ.<br>• ದೂರುಗಳು ಸ್ವೀಕೃತಗೊಂಡಲ್ಲಿ ಅಕ್ರಮ ಗಣಿಗಾರಿಕೆಯನ್ನು ಸ್ಥಗಿತಗೊಳಿಸಿ, ಗಣಿಗಾರಿಕೆ ನಡೆಸುತ್ತಿದ್ದವರ ವಿರುದ್ಧ ನಿಯಮಾನುಸಾರ ಮೊಕದ್ದಮೆಗಳನ್ನು ದಾಖಲಿಸಿ ದಂಡವನ್ನು ವಿಧಿಸಿ ಸಂಗ್ರಹಿಸಲಾಗುತ್ತಿದೆ |

| | | |
|---|---|---|
| ಇ) | ವಸತಿ ಪ್ರದೇಶಗಳ ಸಮೀಪ ನಡೆಯುತ್ತಿರುವ ಗಣಿಗಾರಿಕೆಯಿಂದ ಉಂಟಾಗುತ್ತಿರುವ ಧೂಳು, ಶಬ್ಧ ಮತ್ತು ಕಂಪನದಿಂದ ಸಾರ್ವಜನಿಕರಿಗೆ ತೊಂದರೆ ಯಾಗುತ್ತಿರುವ ಬಗ್ಗೆ ದೂರುಗಳು ಬಂದಿವೆಯೇ; ನಿಯಮ ಉಲ್ಲಂಘಿಸುವ ಗಣಿಗಾರಿಕೆ ಘಟಕಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮ-6(2) ರಂತೆ ಉಪಖನಿಜ ಗಣಿ ಗುತ್ತಿಗೆಗಳ ಮಂಜೂರಾತಿಗೆ ಸಾರ್ವಜನಿಕ ರಚನೆಗಳಾದ ರಾಷ್ಟ್ರೀಯ/ ರಾಜ್ಯ ಹೆದ್ದಾರಿ, ರೈಲ್ವೆ ಲೈನ್, ದೇವಸ್ಥಾನ ಮತ್ತು ಶಾಲೆ, ವಸತಿ, ಜಲಾಶಯ, ಇತ್ಯಾದಿಗಳಿಂದ 50 ಮೀಟರ್ ಸುರಕ್ಷಿತ ಅಂತರವನ್ನು ಕಾಯ್ದಿರಿಸಿಕೊಳ್ಳಲಾಗುತ್ತದೆ.<br>ಸ್ಫೋಟಕ ಬಳಸಿ ಗಣಿಗಾರಿಕೆ ನಡೆಸಲು ಸಾರ್ವಜನಿಕ ರಚನೆಗಳಾದ ರಾಷ್ಟ್ರೀಯ/ ರಾಜ್ಯ ಹೆದ್ದಾರಿ, ರೈಲ್ವೆ ಲೈನ್, ದೇವಸ್ಥಾನ ಮತ್ತು ಶಾಲೆ, ವಸತಿ, ಜಲಾಶಯ, ಇತ್ಯಾದಿಗಳಿಂದ 200 ಮೀಟರ್ ಹಾಗೂ ನಿಯಂತ್ರಿತ ಸ್ಫೋಟಕ ಬಳಸಿ ಕಲ್ಲುಗಣಿಗಾರಿಕೆ ನಿರ್ವಹಿಸಲು 100 ಮೀಟರ್ ಅಂತರವನ್ನು ಕಾಯ್ದಿರಿಸಿ ಗುತ್ತಿಗೆ/ ಲೈಸೆನ್ಸ್ ಗಳನ್ನು ಮಂಜೂರಾತಿ ನೀಡಲಾಗುತ್ತಿದೆ.<br>ಮೇಲಿನ ನಿಯಮಾವಳಿಯಂತೆ ಸುರಕ್ಷಿತ ಅಂತರವನ್ನು ಕಲ್ಲುಗಣಿ ಗುತ್ತಿಗೆಗಳನ್ನು ಮಂಜೂರು ಮಾಡಲಾಗುತ್ತಿದೆ. ಆದಾಗ್ಯೂ ವಸತಿ ಪ್ರದೇಶಗಳ ಸಮೀಪ ನಡೆಯುತ್ತಿರುವ ಗಣಿಗಾರಿಕೆಯಿಂದ ಉಂಟಾಗುತ್ತಿರುವ ಧೂಳು, ಶಬ್ಧ ಮತ್ತು ಕಂಪನದಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ದೂರುಗಳು ಬಂದ ಸಂದರ್ಭದಲ್ಲಿ ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯ ಸದಸ್ಯ ಇಲಾಖೆ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ನಿಯಮಾನುಸಾರ ಅಗತ್ಯ ಕ್ರಮಕೈಗೊಳ್ಳಲಾಗುತ್ತದೆ. |
| ಈ) | ಖನಿಜ ಸಂಪನ್ಮೂಲಗಳ ಅಕ್ರಮ ಸಾಗಾಣಿಕೆಯಿಂದ ಸರ್ಕಾರಕ್ಕೆ ಉಂಟಾಗುತ್ತಿರುವ ರಾಜಸ್ವ ನಷ್ಟವನ್ನು ತಡೆಗಟ್ಟಲು ತೂಕದ ಸೇತುವೆ, GPS, ತಪಾಸಣಾ ಕೇಂದ್ರ ಹಾಗೂ ಆನ್ ಲೈನ್ ಪರವಾನಗಿ ವ್ಯವಸ್ಥೆಗಳನ್ನು ಸಮರ್ಪಕವಾಗಿ ಜಾರಿಗೊಳಿಸಲಾಗಿದೆಯೇ; | ಸಮರ್ಪಕವಾಗಿ ಜಾರಿಗೊಳಿಸಲಾಗಿದೆ.<br>• ಗಣಿ ಗುತ್ತಿಗೆಗಳಲ್ಲಿ ಗಣಿಗಾರಿಕೆ ಪ್ರಾರಂಭಿಸುವ ಪೂರ್ವದಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ILMS ತಂತ್ರಾಂಶದಲ್ಲಿ ನೋಂದಾಯಿಸಿಕೊಂಡು ಉತ್ಪಾದಿಸಿದ ಖನಿಜವನ್ನು On-line ಮೂಲಕ GPS ಅಳವಡಿಸಿದ ವಾಹನದಲ್ಲಿ ಖನಿಜ ರವಾನೆ ಪರವಾನಿಗೆ ಪಡೆದು ಸಾಗಾಣಿಕೆ ಮಾಡುವುದನ್ನು ಕಡ್ಡಾಯಗೊಳಿಸಲಾಗಿದೆ.<br>• ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳು/ ಕಲ್ಲು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆಯನ್ನು ತಡೆಗಟ್ಟಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ), ಜಿಲ್ಲಾ ಮರಳು ಸಮಿತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿದೆ.<br>• ಅಧಿಸೂಚನೆ ಸಂಖ್ಯೆ: ಸಿಐ 21 ಎಂಎಂಎನ್ (2) 2014 ದಿನಾಂಕ: 21-01-2014 ರಂತೆ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ 1957ರ ಕಲಂ 21 ಮತ್ತು 22ರಡಿ ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮ-43 ಮತ್ತು 46 ರಂತೆ ಸದರಿ ಸಮಿತಿಯ ಸದಸ್ಯರುಗಳಿಗೆ ಅನಧಿಕೃತ ಗಣಿಗಾರಿಕೆ, ಸಾಗಾಣಿಕೆ ಮತ್ತು ದಾಸ್ತಾನು ವಿರುದ್ಧ ಕ್ರಮವಹಿಸಲು, ಕಂದಾಯ, ಅರಣ್ಯ, ಪೋಲೀಸ್ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಿದೆ. ಅದರಂತೆ, ನಿಯಮ ಉಲ್ಲಂಘಿಸಿದ ಪ್ರಕರಣಗಳಲ್ಲಿ ದಂಡ ಸಂಗ್ರಹಿಸಲು ಹಾಗೂ ಮೊಕದ್ದಮೆಗಳನ್ನು ದಾಖಲಿಸಲಾಗುತ್ತದೆ. |
| ಉ) | ಉಲ್ಲಂಘನೆ ಮಾಡಿರುವ ಗಣಿಗಾರಿಕೆಗಳ ಮೇಲೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? | |

ಸಂಖ್ಯೆ: ಸಿಐ-ಎಂಎಂಎನ್/347/2026

(ಎಸ್.ಎಸ್.ಮಲ್ಲಿಕಾರ್ಜುನ)
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು